ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

12

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ______ ದಿನಾಂಕ : DATE: 27/1/21

# ಸಭಾಪತಿ ಹುದ್ದೆಗೆ ಮನವಿ ಮಾಡಲು ಜೆಡಿಎಸ್ ನಿರ್ಧಾರ

**ಬೆಂಗಳೂರು:** ವಿಧಾನ ಪರಿಷತ್ ಉಪ ಸಭಾಪತಿ ಸ್ಥಾನ ಬಿಜೆಪಿ ಪಡೆದು ಸಭಾಪತಿ ಸ್ಥಾನ ಜೆಡಿಎಸ್‌ಗೆ ಬಿಟ್ಟುಕೊಡುವಂತೆ ಮನವಿ ಮಾಡಲು ಜೆಡಿಎಸ್ ನಾಯಕರು ನಿರ್ಧರಿಸಿದ್ದಾರೆ.

ಉಪ ಸಭಾಪತಿ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿರುವುದರಿಂದ ಯಾವ ನಿಲುವು ತಾಳಬೇಕು ಎಂಬ ಬಗ್ಗೆ ಚರ್ಚಿಸಲು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಹಾಗೂ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರು ಪರಿಷತ್ ಸದಸ್ಯರ ಜತೆ ನಡೆಸಿದ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಉಪ ಸಭಾಪತಿ ಸ್ಥಾನದ ಚುನಾವಣೆಯಲ್ಲಿ ಜೆಡಿಎಸ್ ಸ್ಪರ್ಧೆ ಮಾಡುವುದು ಬೇಡ. ಬಿಜೆಪಿಗೆ ಬೆಂಬಲಿಸೋಣ. ನಂತರ ತೆರವಾಗುವ ಸಭಾಪತಿ ಸ್ಥಾನಕ್ಕೆ ಪಟ್ಟು ಹಿಡಿಯೋಣ ಎಂದು ಬಹುತೇಕ ಸದಸ್ಯರು ಅಭಿಪ್ರಾಯಪಟ್ಟರು. ಹೀಗಾಗಿ, ಜೆಡಿಎಸ್‌ಗೆ ಸಭಾಪತಿ ಸ್ಥಾನ ಪಡೆಯುವ ಸಂಬಂಧ ಬಿಜೆಪಿಗೆ ಮನವಿ ಮಾಡಲು ನಿರ್ಧರಿಸಲಾಯಿತು ಎಂದು ತಿಳಿದು ಬಂದಿದೆ.

**ಹೊರಟ್ಟಿಗೆ ಕಾದು ಕುಳಿತ ಗೌಡರು:** ಸಭೆಗೆ ಹುಬ್ಬಳ್ಳಿಯಿಂದ ಆಗಮಿಸಬೇಕಾಗಿದ್ದ ಸಭಾಪತಿ ಸ್ಥಾನದ ಆಕಾಂಕ್ಷಿ ಬಸವರಾಜ ಹೊರಟ್ಟಿ ಅವರಿಗೆ ಮಾಜಿ ಪ್ರಧಾನಿ ದೇವೇಗೌಡ ಹಾಗೂ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಎರಡು ಗಂಟೆ ಕಾದು ಕುಳಿತಿದ್ದರು ಎಂದು ತಿಳಿದು ಬಂದಿದೆ.

ಸಭೆಯ ನಂತರ ಮಾತನಾಡಿದ ಬಸವರಾಜ ಹೊರಟ್ಟಿ, ಜೆಡಿಎಸ್‌ಗೆ ಸಭಾಪತಿ ಸ್ಥಾನ ಪಡೆಯಬೇಕೆಂಬ ತೀರ್ಮಾನ ಆಗಿದೆ. ದೇವೇಗೌಡರು ಪ್ರಧಾನಿ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಸಿಎಂ ಯಡಿಯೂರಪ್ಪ ಜತೆ ಮಾತನಾಡಿದ್ದಾರೆ. ಈಗಾಗಲೇ ರಾಜ್ಯ ಬಿಜೆಪಿಗೆ ಈ ಸಂಬಂಧ ನಿರ್ದೇಶನ ಬಂದಿದೆ ಎಂದು ಹೇಳಿದರು.

**ಇಂದು ಬಿಜೆಪಿ ಸಭೆ:** ಈ ಮಧ್ಯೆ, ಬುಧವಾರ ಬಿಜೆಪಿ ವಿಧಾನ ಪರಿಷತ್ ಸದಸ್ಯರೊಂದಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಸಭೆ ನಡೆಸಲಿದ್ದು, ಈ ಸಭೆಯಲ್ಲಿ ಉಪ ಸಭಾಪತಿ ಚುನಾವಣೆಗೆ ಜೆಡಿಎಸ್ ಜೊತೆ ಹೊಂದಾಣಿಕೆ ಮಾಡಿಕೊಳ್ಳುವ ಹಾಗೂ ಸಭಾಪತಿ ಸ್ಥಾನ ಜೆಡಿಎಸ್‌ಗೆ ಬಿಟ್ಟುಕೊಡಬೇಕೇ, ಬೇಡವೇ ಎನ್ನುವ ಕುರಿತು ಚರ್ಚೆ ನಡೆಯಲಿದೆ.